(ಅನುಬಂಧ–2)

(iii) ಕರ್ನಾಟಕ ಕಳ್ಳಭಟ್ಟಿ ವ್ಯಾಪಾರಿಗಳ, ಮಾದಕ ವಸ್ತು ಅಪರಾಧಿಗಳ, ಜೂಜುಕೋರರ, ಗೂಂಡಾಗಳ ಅನೈತಿಕ ವ್ಯವಹಾರ ಅಪರಾಧಿಗಳ ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರ ಅಪಾಯಕಾರಿ ಚಟುವಟಿಕೆಗಳನ್ನು ತಡೆಗಟ್ಟುವ (ತಿದ್ದುಪಡಿ) ವಿಧೇಯಕ, 2009

ಶ್ರೀ ವಿ.ಎಸ್.ಆಚಾರ್ಯ (ಗೃಹ ಸಚಿವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಕಳ್ಳಭಟ್ಟಿ ವ್ಯಾಪಾರಿಗಳ, ಮಾದಕ ವಸ್ತು ಅಪರಾಧಿಗಳ ಜೂಜುಕೋರರ, ಗೂಂಡಾಗಳ, ಅನೈತಿಕ ವ್ಯವಹಾರ ಅಪರಾಧಿಗಳ ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರ ಅಪಾಯಕಾರಿ ಚಟುವಟಿಕೆಗಳನ್ನು ತಡೆಗಟ್ಟುವ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ಕಳ್ಳಭಟ್ಟಿ ವ್ಯಾಪಾರಿಗಳ, ಮಾದಕ ವಸ್ತು ಅಪರಾಧಿಗಳ, ಜೂಜುಕೋರರ, ಗೂಂಡಾಗಳ, ಅನೈತಿಕ ವ್ಯವಹಾರ ಅಪರಾಧಿಗಳ ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರ ಅಪಾಯಕಾರಿ ಚಟುವಟಿಕೆಗಳನ್ನು ತಡೆಗಟ್ಟುವ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ವಿ.ಎಸ್.ಆಚಾರ್ಯ (ಗೃಹ ಸಚಿವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಕಳ್ಳಭಟ್ಟಿ ವ್ಯಾಪಾರಿಗಳ, ಮಾದಕ ವಸ್ತು ಅಪರಾಧಿಗಳ, ಜೂಜುಕೋರರ, ಗೂಂಡಾಗಳ, ಅನೈತಿಕ ವ್ಯವಹಾರ ಅಪರಾಧಿಗಳ ಮತ್ತು ಕೊಳಚೆ ಪ್ರದೇಶಗಳನ್ನು ಕಬಳಿಸುವವರ ಅಪಾಯಕಾರಿ ಚಟುವಟಿಕೆಗಳನ್ನು ತಡೆಗಟ್ಟುವ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.